ಕರ್ನಾಟಕ ಸರ್ಕಾರ
(ಸಾರಿಗೆ ಇಲಾಖೆ)

ಸಂ.ಸಾಆ/ಗಣಕ/ವೈವ-47/2019-20

ಆಯುಕ್ತರ ಕಛೇರಿ, ಸಾರಿಗೆ ಮತ್ತು ರಸ್ತೆ ಸುರಕ್ಷತೆ,
1ನೇ ಮಹಡಿ, 'ಎ' ಬ್ಲಾಕ್, ಟಿ.ಟಿ.ಎಂ.ಸಿ. ಕಟ್ಟಡ,
ಕೆ.ಹೆಚ್. ರಸ್ತೆ ಶಾಂತಿನಗರ, ಬೆಂಗಳೂರು-27.
ದಿನಾಂಕ:27-05-2020. ದೂ:080-22214900
ಮಿಂಚಂಚೆ: transcom@nic.in.

# ಸುತ್ತೋಲೆ

ವಿಷಯ : ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿನ ಪ್ರಾದೇಶಿಕ ಸಾರಿಗೆ ಕಛೇರಿಗಳಲ್ಲಿ ಚಾಲನಾ ಅನುಜ್ಞಾ ಪತ್ರಕ್ಕೆ ಸಂಬಂಧಿಸಿದ ಸಾರಥಿ-4 ತಂತ್ರಾಂಶದ ಬಳಕೆ ಕುರಿತು.

ಉಲ್ಲೇಖ : ಸಾರಿಗೆ ಆಯುಕ್ತರ ಸುತ್ತೋಲೆ ಸಂಖ್ಯೆ:ಸಾಆ/ಗಣಕ/ವೈವ-47/2019-20, ದಿನಾಂಕ:04-05-2020.

***

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ನೋವೆಲ್ ಕರೋನ ವೈರಾಣು (ಕೋವಿಡ್-19) ಸಾಂಕ್ರಾಮಿಕ ರೋಗ ಹರಡದಂತೆ ರಾಜ್ಯಾದ್ಯಂತ ದಿನಾಂಕ:19-03-2020 ರಿಂದ ಲಾಕ್‌ಡೌನ್ ಜಾರಿಯಾಗಿತ್ತು. ಈ ಸಂಬಂಧ ರಾಜ್ಯಾದ್ಯಂತ ಎಲ್ಲಾ ಪ್ರಾದೇಶಿಕ ಸಾರಿಗೆ ಕಛೇರಿಗಳಲ್ಲಿ ಚಾಲನಾ ಅನುಜ್ಞಾ ಪತ್ರ ಮತ್ತು ನೋಂದಣಿ ಪ್ರಮಾಣಪತ್ರಕ್ಕೆ ಸಂಬಂಧಿಸಿದ ಸೇವೆಗಳನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿತ್ತು.

ಉಲ್ಲೇಖಿತ ಸುತ್ತೋಲೆಯಲ್ಲಿ ರಾಜ್ಯದ 14 ಜಿಲ್ಲೆಗಳಲ್ಲಿ ದಿನಾಂಕ:07-05-2020 ರಿಂದ ಜಾರಿಗೆ ಬರುವಂತೆ ಸಾರಥಿ-4 ತಂತ್ರಾಂಶವನ್ನು ಬಳಸಿಕೊಂಡು ಚಾಲನಾ ಅನುಜ್ಞಾ ಪತ್ರ ಸಂಬಂಧಿತ ಸೇವೆಗಳನ್ನು ಸಾರ್ವಜನಿಕರಿಗೆ ಅನುವು ಮಾಡಿಕೊಡಲು ತಿಳಿಸಲಾಗಿತ್ತು. ಮುಂದುವರೆದು, ಇನ್ನುಳಿದ 16 ಜಿಲ್ಲೆಗಳಲ್ಲಿನ ಪ್ರಾದೇಶಿಕ ಸಾರಿಗೆ ಕಛೇರಿಗಳಲ್ಲಿ ತಕ್ಷಣವೇ ಜಾರಿಗೆ ಬರುವಂತೆ ಸಾರಥಿ-4 ತಂತ್ರಾಂಶವನ್ನು ಉಪಯೋಗಿಸಿಕೊಂಡು ಚಾಲನಾ ಅನುಜ್ಞಾ ಪತ್ರ ಸಂಬಂಧಿತ ಸೇವೆಗಳನ್ನು ಸಾರ್ವಜನಿಕರಿಗೆ ನೀಡಲು ಅನುವು ಮಾಡಿಕೊಡಲಾಗಿದೆ. ಸಾರಥಿ-4 ತಂತ್ರಾಂಶದ ಮೂಲಕ ದಿನಾಂಕ:01-06-2020 ರಿಂದ ಸಾರ್ವಜನಿಕರು ಸ್ಲಾಟ್‌ಗಳನ್ನು ಕಾಯ್ದಿರಿಸಲು ಮತ್ತು ಪರೀಕ್ಷೆಗೆ ಹಾಜರಾಗಲು ಸೂಕ್ತ ಕ್ರಮಗಳನ್ನು ತೆಗೆದುಕೊಳ್ಳಲು ರಾಜ್ಯದ 16 ಜಿಲ್ಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಾರಿಗೆ ಕಛೇರಿಯ ಮುಖ್ಯಸ್ಥರುಗಳಿಗೆ ಸೂಚಿಸಲಾಗಿದೆ.

...2

ಸಾರಿಗೆ ಅಧಿಕಾರಿಗಳು ನೋವೆಲ್ ಕರೋನ ವೈರಾಣು (ಕೋವಿಡ್–19) ಸಾಂಕ್ರಾಮಿಕ ರೋಗ ಹರಡದಂತೆ ಕಛೇರಿಗೆ ಬರುವ ಸಾರ್ವಜನಿಕರಲ್ಲಿ ಸಾಮಾಜಿಕ ಅಂತರ ಕಾಪಾಡುವಿಕೆ, ಮಾಸ್ಕ್ ಧರಿಸುವುದು, ಸ್ಯಾನಿಟೈಸರ್‌ಗಳನ್ನು ಬಳಸುವುದು ಮತ್ತು ಥರ್ಮಲ್ ಸ್ಕ್ರೀನಿಂಗ್‌ಗೆ ಒಳಪಡಿಸುವುದು, ಮುಂತಾದ ಎಚ್ಚರಿಕೆ ಕ್ರಮಗಳನ್ನು ತೆಗೆದುಕೊಳ್ಳಲು ಸೂಚಿಸಲಾಗಿದೆ. ಈಗಾಗಲೇ ಸ್ಲಾಟ್ ಬುಕ್ಕಿಂಗ್ ಮಾಡಿರುವ ಅಭ್ಯರ್ಥಿಗಳಲ್ಲಿ ಪ್ರತಿದಿನ 50 % ಅಭ್ಯರ್ಥಿಗಳಿಗೆ ಮಾತ್ರ ಅವಕಾಶ ಮಾಡಿಕೊಡುವಂತೆ ನಿರ್ದೇಶಿಸಲಾಗಿದೆ.

28/05

ಆಯುಕ್ತರು,
ಸಾರಿಗೆ ಮತ್ತು ರಸ್ತೆ ಸುರಕ್ಷತೆ,
ಬೆಂಗಳೂರು.

ಇವರಿಗೆ,

1) ರಾಜ್ಯದ ಎಲ್ಲಾ ಅಪರ ಸಾರಿಗೆ ಆಯುಕ್ತರು ಮತ್ತು ಜಂಟಿ ಸಾರಿಗೆ ಆಯುಕ್ತರುಗಳ ಮಾಹಿತಿಗಾಗಿ ಮತ್ತು ಸೂಕ್ತ ಕ್ರಮಕ್ಕಾಗಿ.
2) ರಾಜ್ಯದ ಎಲ್ಲಾ ಉಪ ಸಾರಿಗೆ ಆಯುಕ್ತರು ಮತ್ತು ಹಿರಿಯ ಪ್ರಾದೇಶಿಕ / ಪ್ರಾದೇಶಿಕ / ಸಹಾಯಕ ಪ್ರಾದೇಶಿಕ ಸಾರಿಗೆ ಅಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ.
3) ಅಪರ ಸಾರಿಗೆ ಆಯುಕ್ತರು (ಪರಿಸರ ಮತ್ತು ಇ–ಆಡಳಿತ) ಬೆಂಗಳೂರು ರವರು ಸುತ್ತೋಲೆಯ ಪ್ರತಿಯನ್ನು ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಸೂಕ್ತ ಕ್ರಮಕ್ಕಾಗಿ.
4) ಎನ್.ಐ.ಸಿ.ಯ ಅಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ.